## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರು/ ಹೆಣ್ಣುಮಕ್ಕಳಿಗೆ ಪರಿಹಾರವನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಮಮಇ 268 ಮಮಅ 2006 ದಿನಾಂಕ: 27.11.2007

2) ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ ಇವರ ಪತ್ರ ಸಂಖ್ಯೆ: ಕರಾಮಾ/ ಆ್ಯ.ದಾ/ 2013-14/ 1623, ದಿನಾಂಕ: 05.09.2013.

***

**ಪ್ರಸ್ತಾವನೆ:**

ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರು/ ಹೆಣ್ಣುಮಕ್ಕಳಿಗೆ ಪರಿಹಾರ ಕಲ್ಪಿಸುವ ಸುರಕ್ಷಾ ಯೋಜನೆಯಡಿ ಗಾಯದ ತೀವ್ರತೆಯ ಆಧಾರದ ಮೇಲೆ ಗರಿಷ್ಠ ರೂ.2.00ಲಕ್ಷ ಪರಿಹಾರವನ್ನು ಮಂಜೂರು ಮಾಡಲು ಮೇಲೆ ಕ್ರ.ಸಂ(1)ರಲ್ಲಿ ಓದಲಾದ ದಿನಾಂಕ:27-11-2007ರ ಆದೇಶದಲ್ಲಿ ಮಂಜೂರಾತಿ ನೀಡಲಾಗಿತ್ತು.

ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ(CRL) ಸಂಖ್ಯೆ: 129/2006ರ ದಿ:18.07.2013 ರಂದು ನೀಡಿರುವ ಆದೇಶದಲ್ಲಿ ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ ಆ್ಯಸಿಡ್ ದಾಳಿಗೆ ಒಳಗಾದ 15 ದಿನಗಳೊಳಗಾಗಿ ರೂ.1.00 ಲಕ್ಷಗಳನ್ನು ಮತ್ತು ಉಳಿದ ರೂ.2.00 ಲಕ್ಷಗಳನ್ನು ಎರಡು ತಿಂಗಳೊಳಗಾಗಿ ಪಾವತಿಸಲು ಆದೇಶಿಸಿರುತ್ತದೆ. ಆದುದರಿಂದ ಸರ್ವೋಚ್ಚ ನ್ಯಾಯಾಲಯ ಆದೇಶದಂತೆ ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರು/ ಹೆಣ್ಣುಮಕ್ಕಳಿಗೆ ನೀಡುತ್ತಿರುವ ಪರಿಹಾರವನ್ನು ಪರಿಷ್ಕರಿಸಲು ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ ಇವರು ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ಪತ್ರ ದಿನಾಂಕ:05-09-2013ರಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಯೋಜನೆಯ ಪರಿಹಾರವನ್ನು ಪರಿಷ್ಕರಿಸಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ: ಮಮಇ 29 ರಾಮಆ 2013, ದಿನಾಂಕ: 20.03.2015

ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ/ಹೆಣ್ಣುಮಕ್ಕಳಿಗೆ ಸುರಕ್ಷಾ ಯೋಜನೆಯಡಿ ನೀಡಲಾಗುತ್ತಿದ್ದ ಪರಿಹಾರ ಮೊತ್ತವನ್ನು ರೂ. 2.00 ಲಕ್ಷಗಳಿಂದ ಕನಿಷ್ಠ ರೂ.3.00 (ರೂಪಾಯಿ ಮೂರು ಲಕ್ಷಗಳು ಮಾತ್ರ) ಲಕ್ಷಗಳಿಗೆ ಹೆಚ್ಚಿಸಿದೆ.

ಪರಿಹಾರ ವೆಚ್ಚವನ್ನು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಲೆಕ್ಕಶೀರ್ಷಿಕೆ 2235-02-103-0-50-059ರಲ್ಲಿ ಒದಗಿಸಲಾದ ಅನುದಾನದಿಂದ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ – 2
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಜಿ & ಎಸ್ಎಸ್ಎ/ ಇಆರ್ಎಸ್ಎ ಮತ್ತು ಎ & ಇ )ಅಂಚೆ ಪೆಟ್ಟಿಗೆ ಸಂಖ್ಯೆ: 5398, ಕರ್ನಾಟಕ, ಬೆಂಗಳೂರು.

..2